ವಿಷಯ:- ಮುಧೋಳ್ ತಾಲ್ಲೂಕಿನಲ್ಲಿರುವ ಸರ್ಕಾರಿ ಆಯುರ್ವೇದ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆ.

1313 (2247) ಶ್ರೀ ಗೋವಿಂದ ಎಂ. ಕಾರಜೋಳ (ಮುಧೋಳ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮುಧೋಳ ತಾಲ್ಲೂಕಿನಲ್ಲಿರುವ ಸರ್ಕಾರಿ ಆಯುರ್ವೇದಿಕ್ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದರೆ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಇ) ಎಷ್ಟು ದಿನಗಳಲ್ಲಿ ವೈದ್ಯರನ್ನು ಮತ್ತು ಸಿಬ್ಬಂದಿಯನ್ನು ನೇಮಕ ಮಾಡಲಾಗುವುದು?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಗಮನಕ್ಕೆ ಬಂದಿದೆ.

ಆ) ಔಷಧಿ ವಿತರಕರುಗಳ ಹುದ್ದೆಗಳು ಖಾಲಿಯಿದ್ದು ಅರ್ಹ ಅಭ್ಯರ್ಥಿಗಳು ಇಲ್ಲದಿರುವುದರಿಂದ ಭರ್ತಿ ಮಾಡಿರುವುದಿಲ್ಲ. ತರಬೇತಿ ನೀಡಿದ ನಂತರ ಖಾಲಿಯಿರುವ ಹುದ್ದೆಗಳನ್ನು ತುಂಬಲಾಗುವುದು. ಖಾಲಿಯಿರುವ ಗ್ರೂಪ್–ಡಿ ಹುದ್ದೆಗಳನ್ನು ತುಂಬಲು ಸಕ್ರಮಗೊಳಿಸಿದ ದಿನಗೂಲಿ ನೌಕರರನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗಿದೆ.

ಇ) ಖಾಲಿಯಿರುವ ಸಿಬ್ಬಂದಿಯ ಹುದ್ದೆಗಳನ್ನು ಆದಷ್ಟು ಬೇಗನೆ ಭರ್ತಿಮಾಡಲಾಗುವುದು.

ವಿಷಯ:- ಮುಧೋಳ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ.

1314 (2163) ಶ್ರೀ ಜಿ.ಎಂ. ಕಾರಜೋಳ (ಮುಧೋಳ್):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮುಧೋಳ ತಾಲ್ಲೂಕಿನ ರೂಗಿ, ಬೆಳಗಲೆ, ಬಸನಾಳ, ಲೋಕಾಪುರ ಮತ್ತು ಕನಸಗೇರಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಸರ್ಕಾರದವರು ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಇ) ಬೆಳಗಲೆ ಗ್ರಾಮದ ಕುಡಿಯುವ ನೀರು ಪೂರೈಕೆ ಯೋಜನೆಯನ್ನು ಸರ್ಕಾರಕ್ಕೆ ಸಲ್ಲಿಸಿ, 4-5 ತಿಂಗಳು ಗತಿಸಿದರೂ ಮಂಜೂರಾತಿ ಮಾಡದೆ ಇರುವುದಕ್ಕೆ ಕಾರಣಗಳೇನು ಮತ್ತು ಯಾವಾಗ ಮಂಜೂರಾತಿ ನೀಡಲಾಗುವುದು?

ಈ) ಎಷ್ಟು ದಿನಗಳಲ್ಲಿ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):-

ಅ) ಬಂದಿದೆ,

ಆ) ಅನುಬಂಧ–'ಅ' ನಲ್ಲಿ ಕೈಗೊಂಡ ಕ್ರಮಗಳನ್ನು ತಿಳಿಸಲಾಗಿದೆ.